## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಜಿಲ್ಲಾಧಿಕಾರಿಗಳ ಮಿಸಲೇನಿಯಸ್ ವೈಯಕ್ತಿಕ ಠೇವಣಿ ಖಾತೆಗಳನ್ನು 2020–21 ನೇ ಸಾಲಿಗೆ ಮುಂದುವರೆಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಆಇ 12 ಟಿಎಆರ್ 2020 ದಿನಾಂಕ:24–04–2020.

********

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಕೆಲವು ಯೋಜನೆಗಳಿಗೆ ಸಂಬಂಧಿಸಿದ ಅನುದಾನವನ್ನು ಮಾತ್ರ ಒದಗಿಸಿರುವ ಉದ್ದೇಶಕ್ಕೆ ಬಳಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಹೆಸರಿನಲ್ಲಿರುವ ಮಿಸಲೇನಿಯಸ್ ವೈಯಕ್ತಿಕ ಠೇವಣಿ ಖಾತೆಗಳನ್ನು ದಿನಾಂಕ:1–4–2020ರಿಂದ ದಿನಾಂಕ:30–06–2020 ರವರೆಗೆ ಮುಂದುವರೆಸಲು ಅನುಮತಿ ನೀಡಲಾಗಿದೆ. ಮುಂದುವರೆದು, ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿರುವ ಭೂ–ಸ್ವಾಧೀನ ವೆಚ್ಚಗಳನ್ನು ಬಳಸಲು ಅನುವಾಗುವಂತೆ ಈ ಯೋಜನೆಗೆ ಸಂಬಂಧಿಸಿದ ವೆಚ್ಚಗಳನ್ನು ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಿಂದ ಪಾವತಿಸಲು ತೀರ್ಮಾನಿಸಿ ಕೆಳಗಿನಂತೆ ಆದೇಶಿಸಿದೆ.

### <u>ಸರ್ಕಾರದ ಆದೇಶ ಸಂಖ್ಯೆ. ಆಇ 12 ಟಿಎಆರ್ 2020</u>
### <u>ಬೆಂಗಳೂರು, ದಿನಾಂಕ: 07–05–2020</u>

ಎಲ್ಲಾ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿರುವ ಭೂಮಿ ಯೋಜನೆ, ಖಾಯಂ ಮುಂಗಡ ನಿಧಿ, ಎಸ್‌ಸಿ/ಎಸ್‌ಟಿ ದೌರ್ಜನ್ಯ ಪರಿಹಾರ ನಿಧಿ, ಜೀತ ವಿಮುಕ್ತಿ, ಎಂಡೋಸಲ್ಫಾನ್ ಪರಿಹಾರ ಕಾರ್ಯಗಳು ಹಾಗೂ ಕುಡಿಯುವ ನೀರಿನ ಯೋಜನೆಗಳ ಜೊತೆಗೆ **ಭೂ–ಸ್ವಾಧೀನ ವೆಚ್ಚಗಳಿಗೆ ಸಂಬಂಧಿಸಿದ (Land Acquisition Charges) ವೆಚ್ಚಗಳನ್ನು ಜಿಲ್ಲಾ**ಧಿಕಾರಿಗಳ ಪಿ.ಡಿ. ಖಾತೆಯಿಂದ ಪಾವತಿಸಲು ಅನುಮತಿ ನೀಡಲಾಗಿದೆ.

ಮೇಲೆ ತಿಳಿಸಿರುವ ಯೋಜನೆಗಳಿಗೆ ಸಂಬಂಧಿಸಿದ ಬಿಲ್ಲುಗಳನ್ನು ಮಾತ್ರ ಖಜಾನೆಯಲ್ಲಿ ತೀರ್ಣಗೊಳಿಸಲು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/5/2020

**(ಹೆಚ್.ಎ.ಶೋಭ)**
ಸರ್ಕಾರದ ಉಪ ಕಾರ್ಯದರ್ಶಿ (ಎಫ್‌ಆರ್&ಬಿಸಿಸಿ)
ಆರ್ಥಿಕ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು–1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಯುಕ್ತರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
5. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳಿಗೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.